ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು – 1

ಸಂಖ್ಯೆ:ಸಿ7(8)ಆರ್.ಟಿ.ಇ.ಪ್ರ.ಪ್ರ 01/18-19/2017-18

ದಿನಾಂಕ: 20.04.2018

**ವಿಶೇಷ ಗಮನಕ್ಕಾಗಿ**

## ಸುತ್ತೋಲೆ

ವಿಷಯ: 2018-19 ನೇ ಸಾಲಿಗೆ ಆರ್.ಟಿ.ಇ ಕಾಯ್ದೆಯಡಿಯಲ್ಲಿ ಮೊದಲ ಸುತ್ತಿನ ಸೀಟು ಹಂಚಿಕೆ ಮಾಡಿರುವ ಬಗ್ಗೆ

ಉಲ್ಲೇಖ: ಆರ್.ಟಿ.ಇ ಕಾಯ್ದೆಯಡಿ ಅನ್ ಲೈನ್ ತಂತ್ರಾಂಶದಲ್ಲಿ ಲಾಟರಿ ಮೂಲಕ ಮೊದಲ ಸುತ್ತಿನಲ್ಲಿ ಹಂಚಿಕೆಯಾದ ಸೀಟುಗಳ ಹಂಚಿಕೆ ಪ್ರಕ್ರಿಯೆ ದಿನಾಂಕ: 20.04.2018

**********

2018-19 ನೇ ಸಾಲಿಗೆ ಆರ್.ಟಿ.ಇ ಕಾಯ್ದೆಯಡಿಯಲ್ಲಿ ದಿನಾಂಕ: 20.04.2018 ರಂದು ಅನ್‌ಲೈನ್ ತಂತ್ರಾಂಶದಲ್ಲಿ ಲಾಟರಿ ಮೂಲಕ ಮೊದಲ ಸುತ್ತಿನ ಸೀಟು ಹಂಚಿಕೆ ಮಾಡಲಾಗಿದೆ. ಸೀಟು ಹಂಚಿಕೆಯಾದ ಪ್ರತಿ ಮಗುವಿನ ಪೋಷಕರ ಮೊಬೈಲ್ ಸಂಖ್ಯೆಗೆ ದಿನಾಂಕ:20.04.2018 ಹಾಗೂ 21.04.2018 ರಂದು ಪ್ರತಿದಿನ 04 ಬಾರಿ ಕನ್ನಡ ಹಾಗೂ ಆಂಗ್ಲ ಬಾಷೆಗಳಲ್ಲಿ ಎಸ್.ಎಂ.ಎಸ್ ಕಳುಹಿಸಲಾಗುವುದು.

ಆದ್ದರಿಂದ ಆಯ್ಕೆಯಾದ ಮಗುವಿನ ಪೋಷಕರು ಇಲಾಖಾ ವೆಬ್‌ಸೈಟ್ www.schooleducation.kar.nic.in ಗೆ ಭೇಟಿ ನೀಡಿ, ಸೀಟು ಆಯ್ಕೆಯಾದ ಅರ್ಜಿಯ ಸಂಖ್ಯೆಯನ್ನು ನಮೂದಿಸಿ, ಸೀಟು ಹಂಚಿಕೆಯಾದ ಪ್ರತಿಯ ಪ್ರಿಂಟ್ ಪಡೆದುಕೊಂಡು, ಈಗಾಗಲೇ ಆರ್.ಟಿ.ಇ ಅರ್ಜಿಯೊಂದಿಗೆ ನೀಡಿದ ಮೂಲ ಆಧಾರ್ ಕಾರ್ಡ್‌ನೊಂದಿಗೆ ಆಯ್ಕೆಯಾದ ಶಾಲೆಯನ್ನು ಸಂಪರ್ಕಿಸಿ ಮಗುವನ್ನು ದಾಖಲೆ ಮಾಡಿಸುವುದು. ದಾಖಲಾತಿ ಮಾಡಲು ದಿನಾಂಕ: 28.04.2018 ಕೊನೆಯ ದಿನವಾಗಿರುತ್ತದೆ.

ಸೀಟು ಹಂಚಿಕೆಯಾಗುವ ಮೊದಲೇ ಪೋಷಕರು ಹಾಗೂ ಮಗುವಿನ ಎಲ್ಲಾ ದಾಖಲೆಗಳನ್ನು ಇಲಾಖೆಯ ಹಂತದಲ್ಲಿ ಸಂಪೂರ್ಣವಾಗಿ ಪರಿಶೀಲಿಸಿರುವುದರಿಂದ, ಯಾವುದೇ ಕಾರಣಕ್ಕೂ ಆಡಳಿತ ಮಂಡಳಿಯವರು ದಾಖಲೆಗಳನ್ನು ಮರುಪರಿಶೀಲನೆ ಮಾಡುವ ಅವಶ್ಯಕತೆ ಇರುವುದಿಲ್ಲ. ಪ್ರವೇಶದ ಸಂದರ್ಭದಲ್ಲಿ ಪೋಷಕರು ನೀಡುವ ಆಧಾರ್ ಕಾರ್ಡನ್ನು ಪೋಷಕರು ಹಾಗೂ ಮಗುವನ್ನು ಗುರುತಿಸಲು ಮಾತ್ರ ಪರಿಗಣಿಸಲು ಈ ಮೂಲಕ ಸೂಚಿಸಿದೆ. ಈ ವಿಚಾರವನ್ನು ಉಪನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಗೆ ಬರುವ ಖಾಸಗಿ ಶಾಲೆಗಳ ಆಡಳಿತ ಮಂಡಳಿಗಳ ಗಮನಕ್ಕೆ ತರಲು ಹಾಗೂ ಸೂಕ್ತ ನಿರ್ದೇಶನವನ್ನು ನೀಡಲು ಈ ಮೂಲಕ ಸೂಚಿಸಿದೆ.

ಶಾಲಾ ಆಡಳಿತ ಮಂಡಳಿಯು ಆಯಾ ದಿನ ದಾಖಲಾದ ವಿದ್ಯಾರ್ಥಿಗಳ ವಿವರವನ್ನು ಕಡ್ಡಾಯವಾಗಿ ಆನ್‌ಲೈನ್ ಮೂಲಕ ಅದೇ ದಿನ ಅಪ್‌ಲೋಡ್ ಮಾಡುವುದು. ದಾಖಲಾತಿ ಸಂಬಂಧ ಅಡಚಣೆಯಾದಲ್ಲಿ ಇಲಾಖಾ ವೆಬ್‌ಸೈಟ್‌ನ ಆರ್.ಟಿ.ಇ ವಿಭಾಗಕ್ಕೆ ಆನ್‌ಲೈನ್‌ನಲ್ಲಿ ದೂರು ಸಲ್ಲಿಸಿ ಪರಿಹಾರ ಕಂಡುಕೊಳ್ಳಲು ವ್ಯವಸ್ಥೆ ಮಾಡಲಾಗಿದೆ.

ಆಯುಕ್ತರು

ಸಾರ್ವಜನಿಕ ಶಿಕ್ಷಣ ಇಲಾಖೆ

**ಇವರಿಗೆ**

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಸಂಬಂಧಪಟ್ಟ ಎಲ್ಲಾ ಅನುದಾನಿತ ಹಾಗೂ ಅನುದಾನರಹಿತ ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ
4. ಕಛೇರಿ ಪ್ರತಿ.